SEPTEMBER 02, 2026

## AKASHAVANI - DHARWAD

## PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಹುಬ್ಬಳ್ಳಿ–ಧಾರವಾಡ ಮಹಾನಗರದ,** ಕುಡಿಯುವ ನೀರು ಪೂರೈಕೆಗಾಗಿರುವ ಮಹದಾಯಿ ಯೋಜನೆಗೆ, ಕೇಂದ್ರ ಮಟ್ಟದಲ್ಲಿ ಬಾಕಿ ಇರುವ ಅರಣ್ಯ ಹಾಗೂ ವನ್ಯಜೀವಿ ಇಲಾಖೆ ಅನುಮೋದನೆ ಸಿಗಬೇಕಿದೆ. ಈ ನಿಟ್ಟಿನಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರೊಂದಿಗೆ ಚರ್ಚಿಸಿ, ಕೇಂದ್ರ ಸರ್ಕಾರದ ಅನುಮತಿ ಪಡೆಯಲು ಪ್ರಯತ್ನಿಸಲಾಗುವುದು ಎಂದು ಜಲ ಸಂಪನ್ಮೂಲ ಖಾತೆ ಸಚಿವ ಎನ್.ಚಲುವರಾಯ ಸ್ವಾಮಿ ಹೇಳಿದರು. ಹೊಸದಿಲ್ಲಿಯಲ್ಲಿ ಆಯೋಜಿತ ಎರಡು ದಿನಗಳ 'ರಾಷ್ಟ್ರೀಯ ಜಲಸಂಪನ್ಮೂಲ ಹಾಗೂ ಕುಡಿಯುವ ನೀರು' ಸಮಾವೇಶದ ಸಂದರ್ಭದಲ್ಲಿ, ಕರ್ನಾಟಕ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ, ಅವರು ಮಾತನಾಡಿದರು. ಕೃ ಣ್ಣ ಜಲ ಹಂಚಿಕೆ ವ್ಯಾಜ್ಯ, ನಾಳೆ, 3 ತಾರೀಖಿನಂದು ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಗೆ ಬರಲಿದೆ. ರಾಜ್ಯಕ್ಕೆ ಹಂಚಿಕೆಯಾಗಿರುವ ನೀರನ್ನು ಸದ್ಬಳಕೆ ಮಾಡಿಕೊಳ್ಳಲು ಅನುಕೂಲವಾಗುವಂತೆ ಗೆಜೆಟ್ ಅಧಿಸೂಚನೆ ಹೊರಡಿಸಲು ಕೇಂದ್ರಕ್ಕೆ ಒತ್ತಾಯಿಸಲಾಗುತ್ತಿದೆ ಎಂದರು.

<><><>

**ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾಗಿ,** ಇಂದಿಗೆ ಒಂದು ವರ್ಷವಾಗಿದೆ. ಆಡಳಿತ ವಿಕೇಂದ್ರೀಕರಣ ಹಾಗೂ ಜನಸ್ನೇಹಿ ಆಡಳಿತ ನೀಡುವ ಸಲುವಾಗಿ ವರ್ಷದ ಹಿಂದೆ ಐದು ನಗರ ಪಾಲಿಕೆಗಳನ್ನು ನಿರ್ಮಿಸಲಾಯಿತು ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ಬೆಂಗಳೂರಿನ ಸಮಗ್ರ ಅಭಿವೃದ್ಧಿಗೆ ಉತ್ತಮ ಯೋಜನೆ ರೂಪಿಸಲು ಸಾಧ್ಯವಾಗುತ್ತಿದ್ದು, ಜಿ.ಬಿ.ಎ ಅಭಿವೃದ್ಧಿ ಪಯಣವು ಇನ್ನಷ್ಟು ವೇಗ ಪಡೆಯಲಿದೆ ಎಂದು ಹೇಳಿದ್ದಾರೆ.

<><><>

**ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ,** ಎಲ್ಲ ಐದು ನಗರ ಪಾಲಿಕೆ ಶಾಲೆಗಳಲ್ಲಿ, ವಿದ್ಯಾರ್ಥಿಗಳಿಗೆ ಮುಖಚರ್ಯೆ ಆಧಾರಿತ ಹಾಜರಾತಿ ವ್ಯವಸ್ಥೆ ಜಾರಿಗೊಳಿಸುವಂತೆ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಖಾತೆ ಸಚಿವ ಕೃಷ್ಣಬೈರೇಗೌಡ ಶಿಕ್ಷಣ ವಿಭಾಗದ ವಿಶೇಷ ಆಯುಕ್ತರಿಗೆ ಸೂಚಿಸಿದ್ದಾರೆ. ಈಗಾಗಲೇ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮುಖಚರ್ಯೆ ಆಧಾರಿತ ಹಾಜರಾತಿ ವ್ಯವಸ್ಥೆ ಜಾರಿಯಲ್ಲಿದೆ. ಅದೇ ರೀತಿ ಪಾಲಿಕೆ ಶಾಲೆಗಳಲ್ಲಿಯೂ ಅಳವಡಿಸಿಕೊಳ್ಳುವಂತೆ ತಿಳಿಸಿದರು.

<><><>

**ರಾಜ್ಯ** ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು, ಮಹತ್ವಾಕಾಂಕ್ಷಿ ಯೋಜನೆಗಳಾಗಿದ್ದು, ಇಂದು ದೇಶಕ್ಕೆ ಮಾದರಿಯಾಗಿವೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ಯು.ಟಿ ಖಾದರ್ ಹೇಳಿದ್ದಾರೆ. ಮಂಗಳೂರಿನಲ್ಲಿ ಆಯೋಜಿತ,

ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ತಾಲೂಕು ಮಟ್ಟದ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು. ಪಂಚ ಗ್ಯಾರಂಟಿ ಯೋಜನೆಗಳು ಸಮರ್ಪಕ ಆಡಳಿತ ವ್ಯವಸ್ಥೆಯಿಂದ ಪರಿಣಾಮಕಾರಿಯಾಗಿ ಅನುಷ್ಠಾನಗೊಂಡು, ಜನಪರ ಯೋಜನೆಯಾಗಿ ರೂಪುಗೊಂಡಿವೆ ಎಂದರು.

<><><>

**ಚಿಕ್ಕಮಗಳೂರು ಜಿಲ್ಲೆಯ, ಕೆಲ ರೈತರು** ತಮ್ಮ ಕಾಫಿ ತೋಟಗಳಲ್ಲಿ, ಕಾಳು ಮೆಣಸು, ಏಲಕ್ಕಿ ಜೊತೆ ಬೆಣ್ಣೆಹಣ್ಣು ಗಿಡಗಳನ್ನು ಮಿಶ್ರ ಬೆಳೆಯಾಗಿ ಬೆಳೆದು ಉತ್ತಮ ಲಾಭ ಗಳಿಸುತ್ತಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ, ಆಕಾಶವಾಣಿ, 137 ನೇ ಆವೃತ್ತಿಯ, ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ, ಚಿಕ್ಕಮಗಳೂರು ಜಿಲ್ಲೆಯ ರೈತರ ಅವಕಾಡೊ– ಬೆಣ್ಣೆ ಹಣ್ಣಿನ ಕೃಷಿ ಕುರಿತು ಪ್ರಸ್ತಾಪಿಸಿದ್ದರು. ಚಿಕ್ಕಮಗಳೂರು ತಾಲೂಕು, ಮೈಲಿಮನೆ ಗ್ರಾಮದ ಎಂ.ಎಸ್ ವಿರೂಪಾಕ್ಷ ಅವರು, ತಮ್ಮ 2 ಎಕರೆ ಕಾಫಿ ತೋಟದಲ್ಲಿ ಮಿಶ್ರ ಬೆಳೆಯಾಗಿ ಬೆಣ್ಣೆ ಹಣ್ಣಿನ ಕೃಷಿ ಕೈಗೊಂಡಿದ್ದು, ಪ್ರದೇಶ ಸಮಾಚಾರಕ್ಕಾಗಿ ಹೆಚ್ಚಿನ ಮಾಹಿತಿ ನೀಡಿದ್ದಾರೆ.

<><><>

**ವಿರೂಪಾಕ್ಷ ಮೈಲಿಮನೆ ಧ್ವನಿ– 43 ಸೆಕೆಂದುಗಳು**

<><><>

**ಉಪ ಮುಖ್ಯಮಂತ್ರಿ ಡಾಕ್ಟರ ಜಿ. ಪರಮೇಶ್ವರ,** ಮೈಸೂರಿನ, ವಿವಿಧ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸಂಚರಿಸಿ, ರೈತರ ಹೊಲಗಳಿಗೆ ಭೇಟಿ ನೀಡಿ, ಬರ ಪರಿಸ್ಥಿತಿ ಅವಲೋಕಿಸಿ, ರೈತರ ಅಹವಾಲುಗಳನ್ನು ಆಲಿಸಿದರು.

<><><>

**ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ,** ಎಲ್ಲ ಬ್ಯಾಂಕ್ ಗಳು ಕನ್ನಡ ಬಲ್ಲ ಅಭ್ಯರ್ಥಿಗಳ ನೇಮಕಕ್ಕೆ ಮೊದಲ ಆದ್ಯತೆ ನೀಡಬೇಕು. ಈ ಕುರಿತು ಕೇಂದ್ರ ಹಣಕಾಸು ಇಲಾಖೆ ಸೂಕ್ತ ನಿಯಮ ರೂಪಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವ ಶಿವರಾಜ ತಂಗಡಗಿ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಸ್ಥಳೀಯ ಭಾಷೆಯನ್ನು ಮಾತನಾಡಬಲ್ಲ ಅಧಿಕಾರಿಗಳನ್ನು ನೇಮಿಸಲು ಮುಂದಾಗಿರುವ ಬ್ಯಾಂಕ್ ಆಫ್ ಬರೋಡ ಕ್ರಮವನ್ನು ಸ್ವಾಗತಿಸಿದ್ದಾರೆ.

<><><>

**ಉತ್ತರ ಕನ್ನಡ ಜಿಲ್ಲೆ, ಕಾರವಾರದಲ್ಲಿರುವ** ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಮಾಜಿ ಮುಖ್ಯಮಂತ್ರಿ, ಧೀಮಂತ ರಾಜಕಾರಣಿ ರಾಮಕೃಷ್ಣ ಹೆಗಡೆ ಅವರ ಹೆಸರನ್ನು ನಾಮಕರಣ ಮಾಡಿರುವುದು, ಅವರ ಸ್ಮರಣೆಯನ್ನು ಜಿಲ್ಲೆಯ ಜನಮಾನಸದಲ್ಲಿ ಚಿರಸ್ಥಾಯಿಗೊಳಿಸುವ ಸಾರ್ಥಕ ಹಾಗೂ ಅನುಕರಣೀಯ ಹೆಜ್ಜೆಯಾಗಿದೆ ಎಂದು ಹಳಿಯಾಳ ಶಾಸಕ ಆರ್.ವಿ ದೇಶಪಾಂಡೆ ತಿಳಿಸಿದ್ದಾರೆ. ಮಹತ್ವದ ನಿರ್ಧಾರ ಕೈಗೊಂಡ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಅವರಿಗೆ ಧನ್ಯವಾದಗಳನ್ನು ಸಲ್ಲಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>